ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ:ಶೈವಿ:80:ಸ.ಸೇ.ಪ್ರ:2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-560001.
ದಿನಾಂಕ:23.03.2021

# ಸುತ್ತೋಲೆ

ವಿಷಯ: ರಾಜ್ಯ ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಸಲ್ಲಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ರವರ ಸುತ್ತೋಲೆ ಸಂಖ್ಯೆ:ಸಿಆಸುಇ (ಆಸು)65 ಇಆಸು 2020 ದಿನಾಂಕ:02.09.2020, 03-11-2020, ಮತ್ತು 04-03-2021

-**-

ರಾಜ್ಯ ಸರ್ಕಾರದ ಅಧಿಕಾರಿ / ನೌಕರರಿಗೆ "ಸರ್ವೋತ್ತಮ ಸೇವಾ ಪ್ರಶಸ್ತಿ" ನೀಡುವ ಯೋಜನೆಯನ್ನು 2012 ರಿಂದ ಜಾರಿಗೆ ತರಲಾಗಿದ್ದು, ಪ್ರಸ್ತುತ 2020-21ನೇ ಸಾಲಿನಲ್ಲಿ ರಾಜ್ಯ ಮಟ್ಟ, ಇಲಾಖಾ ಮಟ್ಟ ಮತ್ತು ಜಿಲ್ಲಾ ಮಟ್ಟದ "ಸರ್ವೋತ್ತಮ ಸೇವಾ ಪ್ರಶಸ್ತಿ" ಪಡೆಯಲು ರಾಜ್ಯ ಸರ್ಕಾರದ ಅಧಿಕಾರಿ / ನೌಕರರು ತಮ್ಮ ನಾಮ ನಿರ್ದೇಶನಗಳನ್ನು ಆನ್‌ಲೈನ್ ಮೂಲಕ ಮಾತ್ರ ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ ಎಂದು ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

"ಸರ್ವೋತ್ತಮ ಸೇವಾ ಪ್ರಶಸ್ತಿಯ" ಮೂರು ಹಂತದ ಪ್ರಶಸ್ತಿಗಳಿಗೂ ಅರ್ಜಿ ಸಲ್ಲಿಸಬಯಸುವವರು, ಪ್ರತಿ ಹಂತಕ್ಕೂ ಪ್ರತ್ಯೇಕವಾಗಿ ತಮ್ಮ ನಾಮ ನಿರ್ದೇಶನವನ್ನು ಸಲ್ಲಿಸತಕ್ಕದ್ದು.

ನಾಮ ನಿರ್ದೇಶನವನ್ನು ಸಲ್ಲಿಸಬಯಸುವವರು ಜಾಲತಾಣ https://dparar.karnataka.gov.in/ ಅಥವಾ https://sarvothamaawards.karnataka.gov.in/ ದ ಮೂಲಕ 30ನೇ ನವೆಂಬರ್ 2020 ರೊಳಗಾಗಿ ಸಲ್ಲಿಸುವಂತೆ ಸೂಚಿಸಲಾಗಿತ್ತು. ಮುಂದುವರೆದು ದಿನಾಂಕ : 04-03-2021 ರ ಸುತ್ತೋಲೆಯಲ್ಲಿ ಸರ್ವೋತ್ತಮ ಸೇವಾ ಪ್ರಶಸ್ತಿ ಪಡೆಯಲು ನಾಮ ನಿರ್ದೇಶನಗಳನ್ನು ಸಲ್ಲಿಸುವ ಅವಧಿಯನ್ನು ಪುನಃ ದಿನಾಂಕ : 31-03-2021 ರ ವರೆಗೆ ವಿಸ್ತರಿಸಲಾಗಿರುತ್ತದೆ. ಸದರಿ ವಿಸ್ತರಣಾ ಅವಧಿಯಲ್ಲಿ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸುವವರು ಇದರ ಪ್ರಯೋಜನವನ್ನು ಪಡೆದುಕೊಳ್ಳುವಂತೆ ಸೂಚಿಸಲಾಗಿದೆ.

| ಕ್ರ.ಸಂ. | ಪ್ರಶಸ್ತಿ ವಿವರ | ಪ್ರಶಸ್ತಿಗಳ ಸಂಖ್ಯೆ | ಪ್ರತಿ ಪ್ರಶಸ್ತಿವಾರು ಮೊತ್ತ (ರೂ.) |
|---|---|---|---|
| 1. | ಜಿಲ್ಲಾ ಮಟ್ಟ (30 ಜಿಲ್ಲೆ X 10 ಪ್ರಶಸ್ತಿ) | 300 | 10,000.00 |
| 2. | ಇಲಾಖಾವಾರು (ಪ್ರತಿ ಇಲಾಖೆಗೆ 1 ರಂತೆ) | 30 | 15,000.00 |
| 3. | ರಾಜ್ಯಮಟ್ಟ | 10 | 25,000.00 |

ಜಾಲತಾಣದಲ್ಲಿ ಮಾಹಿತಿ / ವಿವರಗಳನ್ನು ದಾಖಲಿಸಲು ಯಾವುದೇ ರೀತಿಯ ಅಡಚಣೆ / ಸಂದೇಹ ಉಂಟಾದಲ್ಲಿ ಹೆಚ್ಚಿನ ಮಾಹಿತಿಗಾಗಿ Help desk ಗೆ ದೂರವಾಣಿ ಮೂಲಕ ಕೇಳಕಂಡವರನ್ನು ಕಛೇರಿ ವೇಳೆಯಲ್ಲಿ ಮಾತ್ರ ಸಂಪರ್ಕಿಸುವುದು.

**ಶ್ರೀ ಮಂಜುನಾಥ್,** ಮೊ.ನಂ:9886670864 ದೂ. : 080-22230060

ಇ-ಮೇಲ್ ವಿಳಾಸ : developer-2.webportal@karnataka.gov.in &
Pm-impl.eoffice@karnataka.gov.in

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:-

1. ರಾಜ್ಯದ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

--2